ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2019–20 ದಿನಾಂಕ: 10–02–2020

# ಮಾಧ್ಯಮದವರ ಗಮನಕ್ಕೆ

ಫೆಬ್ರವರಿ 17 ರಿಂದ ಆರಂಭವಾಗುವ 2020 ನೇ ಸಾಲಿನ ಅಧಿವೇಶನದ ವರದಿಗಾಗಿ ಈಗಾಗಲೇ ಮಾಧ್ಯಮ ಮಾನ್ಯತೆ ಹೊಂದಿರುವ ಮಾಧ್ಯಮ ಪ್ರತಿನಿಧಿಗಳು ನೇರವಾಗಿ ತಮ್ಮ ಭಾವಚಿತ್ರಗಳೊಂದಿಗೆ ವಿಧಾನಸಭಾ ಹಾಗೂ ವಿಧಾನ ಪರಿಷತ್ ಕಾರ್ಯಾಲಯದಲ್ಲಿ ಪ್ರವೇಶ ಪತ್ರಗಳನ್ನು ಪಡೆದುಕೊಳ್ಳಬಹುದು.

ಮಾಧ್ಯಮ ಮಾನ್ಯತೆ ಹೊಂದಿರದ ರಾಷ್ಟ್ರ ಹಾಗೂ ರಾಜ್ಯಮಟ್ಟದ ದಿನಪತ್ರಿಕೆಗಳು ಮತ್ತು ಸುದ್ದಿ ವಾಹಿನಿಗಳ ಮಾಧ್ಯಮ ಪ್ರತಿನಿಧಿಗಳು ತಮ್ಮ ಸಂಸ್ಥೆಯ ಮುಖ್ಯಸ್ಥರ ಶಿಫಾರಸ್ಸು ಪತ್ರ ಹಾಗೂ ಗುರುತಿನ ಚೀಟಿಯ ಪ್ರತಿಯೊಂದಿಗೆ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಕೇಂದ್ರ ಕಚೇರಿಯ ಸುದ್ದಿ ಮತ್ತು ಪತ್ರಿಕಾ ಶಾಖೆಯ ಶ್ರೀ ಜಡಿಯಪ್ಪ ಗೆದ್ಲಗಟ್ಟಿ, ಸಹಾಯಕ ನಿರ್ದೇಶಕರು ಇವರಿಗೆ 13–02–2020 ರೊಳಗೆ ಸಲ್ಲಿಸಲು ಕೋರಿದೆ.

## ಪತ್ರಿಕಾ ಆಮಂತ್ರಣ

1. ಕನ್ನಡ ಪುಸ್ತಕ ಪ್ರಾಧಿಕಾರದಿಂದ 2018 ನೇ ಸಾಲಿನ ವಿವಿಧ ವಾರ್ಷಿಕ ಪ್ರಶಸ್ತಿ ಹಾಗೂ ಬಹುಮಾನ ಪ್ರದಾನ ಸಮಾರಂಭ:

ಪ್ರಶಸ್ತಿ ಹಾಗೂ ಬಹುಮಾನ ವಿತರಣೆ
ಸಿ. ಟಿ. ರವಿ,
ಕನ್ನಡ ಮತ್ತು ಸಂಸ್ಕೃತಿ, ಪ್ರವಾಸೋದ್ಯಮ ಮತ್ತು ಸಕ್ಕರೆ ಇಲಾಖಾ ಸಚಿವರು.

ಮುಖ್ಯ ಅತಿಥಿಗಳು:

**ಡಾ. ಟಿ.ವಿ. ವೆಂಕಟಾಚಲಶಾಸ್ತ್ರಿ,**
**ಹೆಸರಾಂತ ಸಾಹಿತಿಗಳು**

**ಆರ್. ಆರ್. ಜನ್ನು,**
**ಕಾರ್ಯದರ್ಶಿಗಳು,**
**ಕನ್ನಡ ಮತ್ತು ಸಂಸ್ಕೃತಿ ಇಲಾಖೆ**

**ಎಸ್. ರಂಗಪ್ಪ**
**ನಿರ್ದೇಶಕರು,**
**ಕನ್ನಡ ಮತ್ತು ಸಂಸ್ಕೃತಿ ಇಲಾಖೆ.**

**ಅಧ್ಯಕ್ಷತೆ:**

**ಡಾ. ಎಂ.ಎನ್. ನಂದೀಶ್ ಹಂಚೆ,**
**ಅಧ್ಯಕ್ಷರು,**
**ಕನ್ನಡ ಪುಸ್ತಕ ಪ್ರಾಧಿಕಾರ**

**ದಿನಾಂಕ: 11–02–2020, ಮಂಗಳವಾರ, ಸಮಯ: ಸಂಜೆ 6–00 ಗಂಟೆಗೆ**

**ಸ್ಥಳ: ನಯನ ರಂಗಮಂದಿರ, ಕನ್ನಡ ಭವನ, ಜೆ.ಸಿ. ರಸ್ತೆ, ಬೆಂಗಳೂರು.**

## ಪತ್ರಿಕಾ ಪ್ರಕಟಣೆ

# ಮಾರ್ಚ್ 19 ಮತ್ತು 20 ರಂದು

### ಎಂ. ಗೋಪಾಲಕೃಷ್ಣ ಅಡಿಗರ ಜನ್ಮಶತಮಾನೋತ್ಸವ ನೆನಪಿಗಾಗಿ ರಾಷ್ಟ್ರೀಯ ವಿಚಾರಸಂಕಿರಣ

**ಬೆಂಗಳೂರು ಫೆಬ್ರವರಿ 10 (ಕರ್ನಾಟಕ ವಾರ್ತೆ)**

ಕರ್ನಾಟಕ ಸಾಹಿತ್ಯ ಅಕಾಡೆಮಿಯು ದಿನಾಂಕ: 19–03–2020 ಮತ್ತು ದಿನಾಂಕ: 20–03–2020 ರಂದು ಬೆಂಗಳೂರಿನ ರವೀಂದ್ರ ಕಲಾಕ್ಷೇತ್ರದ ನಯನ ಸಭಾಂಗಣದಲ್ಲಿ ಹಿರಿಯ ಕವಿ ಎಂ. ಗೋಪಾಲಕೃಷ್ಣ ಅಡಿಗರ ಜನ್ಮಶತಮಾನೋತ್ಸವ ನೆನಪಿಗಾಗಿ 'ಗೋಪಾಲಕೃಷ್ಣ ಅಡಿಗ ಮತ್ತು ಕನ್ನಡ ಸಾಹಿತ್ಯ' ಎಂಬ ವಿಷಯದಡಿ ರಾಷ್ಟ್ರೀಯ ವಿಚಾರ ಸಂಕಿರಣವನ್ನು ಹಮ್ಮಿಕೊಂಡಿದೆ.

ಈ ವಿಚಾರ ಸಂಕಿರಣದಲ್ಲಿ ಪರ್ಯಾಯ ಗೋಷ್ಠಿಗಳು ನಡೆಯಲಿದೆ. ಅಡಿಗರ ಸಾಹಿತ್ಯ ಕುರಿತಾಗಿ ಪ್ರಬಂಧ ಮಂಡಿಸುವವರು ಫೆಬ್ರವರಿ 25 ರ ಒಳಗೆ ಅಕಾಡೆಮಿಯ ಇ – ಮೇಲ್‌ಗೆ ಈ ಕೆಳಕಂಡ ನಿಬಂಧನೆಗೊಳಪಟ್ಟು ಪ್ರಬಂಧಗಳನ್ನು ಸಲ್ಲಿಸಲು ಕೋರಿದೆ. ಹೆಚ್ಚಿನ ವಿವರಗಳಿಗಾಗಿ ಅಕಾಡೆಮಿಯ ವೆಬ್‌ಸೈಟ್ ಅನ್ನು www.karnatakasahithyaacademy.org ಅನ್ನು ಸಂಪರ್ಕಿಸಬಹುದಾಗಿದೆ.

**ನಿಬಂಧನೆಗಳು:**

- ಪ್ರಬಂಧಗಳು ಅಡಿಗರ ಕಾವ್ಯ, ಗದ್ಯ ಸಾಹಿತ್ಯ, ಅನುವಾದ, ಕನ್ನಡ ಸಾಹಿತ್ಯಕ್ಕೆ ಅಡಿಗರ ಕೊಡುಗೆ, ನವ್ಯ ಸಾಹಿತ್ಯ ಮತ್ತು ಅಡಿಗರು ಹೀಗೆ ಅಡಿಗರ ಸಾಹಿತ್ಯ ಕುರಿತಾಗಿರಬೇಕು.
- ನಿಮ್ಮ ಆಯ್ಕೆಯ ಅಡಿಗರ ಯಾವುದಾದರು ಒಂದು ಕವಿತೆಯ ಮೇಲೆ ಪ್ರಾಯೋಗಿಕ ವಿಮರ್ಶೆ ಮಾಡಿ ಪ್ರಬಂಧವನ್ನು ಕಳುಹಿಸಬಹುದು.
- ಪ್ರಬಂಧವನ್ನು ಕಳುಹಿಸುವವರು ಕಡ್ಡಾಯವಾಗಿ ಪೂರ್ಣ ವಿಳಾಸ, ಮೊಬೈಲ್ ಸಂಖ್ಯೆ, ಇ–ಮೇಲ್ ವಿಳಾಸ ನಮೂದಿಸಬೇಕು.
- ಪ್ರಬಂಧವು 5 ಪುಟಗಳನ್ನು ಮೀರಿರಬಾರದು.
- ಪ್ರಬಂಧಗಳು ನುಡಿ ತಂತ್ರಾಂಶ 4.0 ದಲ್ಲಿರಬೇಕು ಮತ್ತು ಫಾಂಟ್ ಸೈಜ್ 12 ಇರಬೇಕು.
- ಅರ್ಹ ಪ್ರಬಂಧಗಳನ್ನು ಆಯ್ಕೆ ಮಾಡುವಲ್ಲಿ ಅಕಾಡೆಮಿಯ ತೀರ್ಮಾನವೇ ಅಂತಿಮ.
- ಆಯ್ಕೆಯಾದ ಪ್ರಬಂಧಕಾರರಿಗೆ ಉಳಿದುಕೊಳ್ಳಲು ವಸತಿ ಹಾಗೂ ಊಟದ ವ್ಯವಸ್ಥೆಯನ್ನು ಅಕಾಡೆಮಿ ಭರಿಸುತ್ತದೆ. ಯಾವುದೇ ಪ್ರೋತ್ಸಾಹ ಧನ ಅಥವಾ ಪ್ರಯಾಣ ಭತ್ಯೆಯನ್ನು ನೀಡಲಾಗುವುದಿಲ್ಲ.
- ಪರ್ಯಾಯ ಗೋಷ್ಠಿಗೆ ಆಯ್ಕೆಯಾದ ಪ್ರಬಂದಕಾರರಿಗೆ ಪ್ರಬಂಧಗಳನ್ನು ಕಳುಹಿಸಲು ಕೊನೆಯ ದಿನಾಂಕ: 25–02–2020 ಆಗಿರುತ್ತದೆ.

ಪ್ರಬಂಧಗಳನ್ನು ರಿಜಿಸ್ಟ್ರಾರ್, ಕರ್ನಾಟಕ ಸಾಹಿತ್ಯ ಅಕಾಡೆಮಿ, ಎರಡನೇ ಮಹಡಿ, ಕನ್ನಡ ಭವನ, ಜೆ.ಸಿ. ರಸ್ತೆ, ಬೆಂಗಳೂರು – 560 002 ಈ ವಿಳಾಸಕ್ಕೆ ಖುದ್ದಾಗಿ/ರಿಜಿಸ್ಟ್ರರ್ ಅಂಚೆ/ಕೊರಿಯರ್ ಅಥವಾ ಇ–ಮೇಲ್ ಮೂಲಕ ಕಳುಹಿಸಬಹುದಾಗಿದೆ ಎಂದು ಕರ್ನಾಟಕ ಸಾಹಿತ್ಯ ಅಕಾಡೆಮಿಯ ಪ್ರಕಟಣೆ ತಿಳಿಸಿದೆ.

## ವಿವಿಧ ಹುದ್ದೆಗಳ ಮೂಲದಾಖಲೆಗಳ ಪರಿಶೀಲನೆ

**ಬೆಂಗಳೂರು ಫೆಬ್ರವರಿ 10 (ಕರ್ನಾಟಕ ವಾರ್ತೆ)**

ಕರ್ನಾಟಕ ಲೋಕಸೇವಾ ಆಯೋಗವು ಗ್ರೂಪ್ 'ಸಿ' ವೃಂದದ ತಾಂತ್ರಿಕ ಹುದ್ದೆಗಳಾದ ಅಲ್ಪಸಂಖ್ಯಾತರ ನಿರ್ದೇಶನಾಲಯದಲ್ಲಿನ ಮಾದರಿ ವಸತಿ ಶಾಲೆ (ನವೋದಯ) ಗಳಲ್ಲಿನ ಸ್ನಾತಕೋತ್ತರ ಪದವೀಧರರ ಕನ್ನಡ ಭಾಷಾ ಶಿಕ್ಷಕರು, ಇಂಗ್ಲೀಷ್ ಭಾಷಾ ಶಿಕ್ಷಕರು, ಹಿಂದಿ ಭಾಷಾ ಶಿಕ್ಷಕರು, ಗಣಿತಶಾಸ್ತ್ರ ಶಿಕ್ಷಕರು, ಸಮಾಜ ವಿಜ್ಞಾನ ಶಿಕ್ಷಕರು, ಭೌತಶಾಸ್ತ್ರ ಶಿಕ್ಷಕರು, ರಸಾಯನಶಾಸ್ತ್ರ ಶಿಕ್ಷಕರು, ಗಣಕಯಂತ್ರ ಶಿಕ್ಷಕರ ಹುದ್ದೆಗಳು ಹಾಗೂ ಗ್ರಂಥಪಾಲಕರು, ಮಹಿಳಾ ಶುಶ್ರೂಷಕಿಯರ ಹುದ್ದೆಗಳ ಮೂಲದಾಖಲೆಗಳ ಪರಿಶೀಲನೆಗೆ ಅರ್ಹರಾದ ಅಭ್ಯರ್ಥಿಗಳು ಪಟ್ಟಿಯನ್ನು ಅಭ್ಯರ್ಥಿಗಳ ಮಾಹಿತಿಗಾಗಿ ಆಯೋಗದ ಅಂತರ್ಜಾಲದಲ್ಲಿ http://kpsc.kar.nic.in ನಲ್ಲಿ ಪ್ರಕಟಿಸಲಾಗಿದೆ ಎಂದು ಆಯೋಗದ ಪ್ರಕಟಣೆ ತಿಳಿಸಿದೆ.

## ಕರ್ನಾಟಕ ಪಶುವೈದ್ಯಕೀಯ ಪರಿಷತ್ತು ಕರಡು ಮತದಾರರ ಪಟ್ಟಿ ಪ್ರಕಟ

**ಬೆಂಗಳೂರು ಫೆಬ್ರವರಿ 10 (ಕರ್ನಾಟಕ ವಾರ್ತೆ)**

ಭಾರತೀಯ ಪಶುವೈದ್ಯಕೀಯ ಪರಿಷತ್ತು ಕರಡು ಮತದಾರರ ಪಟ್ಟಿಯನ್ನು ಪ್ರಕಟಿಸಿದ್ದು, ಈ ಪಟ್ಟಿಯನ್ನು ಕರ್ನಾಟಕ ಪಶುವೈದ್ಯಕೀಯ ಪರಿಷತ್ತಿನ ವೆಬ್‌ಸೈಟ್: www.kvcbangalore.com ನಲ್ಲಿ ಪ್ರಕಟಿಸಿ, ಅದರ ಕಚೇರಿಯಲ್ಲಿ ಸಹ ಪ್ರಚಾರ ಪಡಿಸಿದೆ.

ಕರಡು ಮತದಾರರ ಪಟ್ಟಿಯಲ್ಲಿ ನೊಂದಾಯಿತ ಪಶುವೈದ್ಯರು ತಮ್ಮ ಮಾಹಿತಿಯನ್ನು ಪರಿಶೀಲಿಸಿಕೊಂಡು ವ್ಯತ್ಯಾಸಗಲಿದ್ದಲ್ಲಿ ವೆಬ್‌ಸೈಟ್ ನಲ್ಲಿ ಲಭ್ಯವಿರುವ ನಿಗದಿತ ನಮೂನೆಗಳಲ್ಲಿ ಮಾಹಿತಿಯನ್ನು ನಿಬಂಧಕರು ಕರ್ನಾಟಕ ಪಶುವೈದ್ಯಕೀಯ ಪರಿಷತ್ತು ಇವರಿಗೆ ದಿನಾಂಕ: 21–02–2020 ರೊಳಗೆ ಮಾಹಿತಿಯನ್ನು ಸಲ್ಲಿಸಲು ಸೂಚಿಸಿದೆ.

ನೊಂದಾಯಿತ ಪಶುವೈದ್ಯರು ಮಾಹಿತಿಯನ್ನು ನಿಗಿದತ ವೇಳೆಯಲ್ಲಿ ನೀಡದೆ ಇದ್ದಲ್ಲಿ ನಂತರದ ಆಗುಹೋಗುಗಳಿಗೆ ಅಥವಾ ಚುನಾವಣೆ ಪ್ರಕ್ರಿಯೆಯಲ್ಲಿ ಮತಚಲಾವಣೆ ಹಕ್ಕು ನೀಡಲಾಗಿಲ್ಲ ಎಂಬ ಆಕ್ಷೇಪಣೆಗಳಿಗೆ ಕರ್ನಾಟಕ ಪಶುವೈದ್ಯಕೀಯ ಪರಿಷತ್ ಹೊಣೆಯಾವುದಿಲ್ಲ ಎಂದು ಪ್ರಕಟಣೆ ತಿಳಿಸಿದೆ.

## ಮಾಧ್ಯಮದಲ್ಲಿ ಮಹಿಳೆ : ಹೊಸ ಸವಾಲುಗಳ ಕುರಿತ ವಿಚಾರ ಸಂಕಿರಣ

**ಬೆಂಗಳೂರು ಫೆಬ್ರವರಿ 10 (ಕರ್ನಾಟಕ ವಾರ್ತೆ)**

ಕರ್ನಾಟಕ ಮಾಧ್ಯಮ ಅಕಾಡೆಮಿ, ಕರ್ನಾಟಕ ಪತ್ರಕರ್ತೆಯರ ಸಂಘ (ರಿ), ಕರ್ನಾಟಕ ರಾಜ್ಯ ಮಹಿಳಾ ವಿಶ್ವವಿದ್ಯಾಲಯ, ವಿಜಯಪುರ ಇವರ ಸಂಯುಕ್ತಾಶ್ರಯದಲ್ಲಿ "ಮಾಧ್ಯಮದಲ್ಲಿ ಮಹಿಳೆ : ಹೊಸ ಸವಾಲುಗಳು ವಿಚಾರ ಸಂಕರಣವನ್ನು ಫೆಬ್ರವರಿ 12 ರ ಬುಧವಾರದಂದು ಬೆಳಿಗ್ಗೆ 10.00 ಗಂಟೆಗೆ ಖಿಂಚ ಸಭಾಂಗಣ, ವಿದ್ಯಾಭವನ, ಬೆಂಗಳೂರು ಇಲ್ಲಿ ನಡೆಯಲಿದೆ.

ಈ ಸಮಾರಂಭದ ಉದ್ಘಾಟನೆಯನ್ನು ಹಿರಿಯ ಪತ್ರಕರ್ತೆ ಡಾ. ವಿಜಯಾ ಅವರು ನೆರವೇರಿಸಲಿದ್ದಾರೆ.  ನ್ಯೂ ಇಂಡಿಯನ್ ಎಕ್ಸ್‌ಪ್ರೆಸ್ ಬೆಂಗಳೂರು ಇದರ ಸ್ಥಾನಿಕ ಸಂಪಾದಕರಾದ ಶ್ರೀಮತಿ ಸಾಂತ್ವನಾ ಭಟ್ಟಾಚಾರ್ಯ ಇವರು ಆಶಯ ಭಾಷಣ ಮಾಡಲಿದ್ದಾರೆ.

"ಹಿತೈಷಿಣಿ" ಅಂತರ್ಜಾಲ ಪತ್ರಿಕೆಯ ಸಂಪಾದಕರಾದ ಡಾ. ಆರ್. ಪೂರ್ಣಿಮಾ ಅವರು ಸಮಾರಂಭದ ಅಧ್ಯಕ್ಷತೆಯನ್ನು ವಹಿಸಲಿದ್ದಾರೆ.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸರ್ಕಾರದ ಕಾರ್ಯದರ್ಶಿ ಹಾಗೂ ಕರ್ನಾಟಕ ಮಾಧ್ಯಮ ಅಕಾಡೆಮಿಯ ಅಧ್ಯಕ್ಷರೂ ಆದ ಶ್ರೀ ಕ್ಯಾಪ್ಟನ್ ಪಿ. ಮಣಿವಣ್ಣನ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಆಯುಕ್ತರಾದ ಶ್ರೀ ಎಸ್.ಎನ್. ಸಿದ್ದರಾಮಪ್ಪ, ಹಾಗೂ ಮುಖ್ಯಮಂತ್ರಿಗಳ ಮಾಧ್ಯಮ ಕಾರ್ಯದರ್ಶಿಗಳಾದ ಶ್ರೀ ಎನ್. ಭೃಂಗೀಶ್ ಅವರು ಗೌರವ ಉಪಸ್ಥಿತರಾಗಿ ಪಾಲ್ಗೊಳ್ಳುವರು.

## "ಸಂವಹನದಲ್ಲಿ ಕನ್ನಡ ಭಾಷಾ ಬಳಕೆ" ಕುರಿತಂತೆ ಕನ್ನಡ ಅಭಿವೃದ್ಧಿ ಪ್ರಾಧಿಕಾರದಿಂದ ಕಾರ್ಯಾಗಾರ

**ಬೆಂಗಳೂರು ಫೆಬ್ರವರಿ 10 (ಕರ್ನಾಟಕ ವಾರ್ತೆ)**

ವಿದ್ಯುನ್ಮಾನ ಮಾಧ್ಯಮಗಳಲ್ಲಿ  ಕನ್ನಡ ಭಾಷಾ ಬಳಕೆ ವಿರೂಪಗೊಳ್ಳುತ್ತಿರುವುದು ಸಮಾಜದ ಮೇಲೆ ಹಾಗೂ ಕನ್ನಡದ ಅಸ್ಮಿತೆಯನ್ನು ಉಳಿಸಿಕೊಳ್ಳುವ ನಿಟ್ಟಿನಲ್ಲಿ ಕಷ್ಟವಾಗಬಹುದೆಂಬ ಅಭಿಪ್ರಾಯವನ್ನು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಟಿ.ಎಸ್.ನಾಗಾಭರಣ ಅವರು ವ್ಯಕ್ತಪಡಿಸಿದರು.

ಅವರು ಇಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ವಾರ್ತಾ ಭವನದ ಸಭಾಂಗಣದಲ್ಲಿ ಕನ್ನಡ ಅಭಿವೃದ್ಧಿ ಪ್ರಾಧಿಕಾರ, ಕರ್ನಾಟಕ ಮಾಧ್ಯಮ ಅಕಾಡೆಮಿ ಹಾಗೂ ವಾರ್ತಾ ಇಲಾಖೆಯ ಸಹಯೋಗದಲ್ಲಿ ಅಯೋಜಿಸಲಾಗಿದ್ದ "ಸಂವಹನದಲ್ಲಿ ಕನ್ನಡ ಭಾಷಾ ಬಳಕೆ" ಕುರಿತು ಸಂವಾದ ಕಾರ್ಯಕ್ರಮದಲ್ಲಿ ಮಾತಾನಾಡಿದರು. ವಿದ್ಯುನ್ಮಾನ ಮಾಧ್ಯಮಗಳು ಕನ್ನಡದ ಮೂಲ ಪದಗಳನ್ನು ಪ್ರಯೋಗ ಮಾಡದೇ ತಂತ್ರಜ್ಞಾನದಿಂದ ರೂಪುಗೊಂಡ ಭಾಷೆಯನ್ನು  ಬಳಕೆ ಮಾಡುತ್ತಿರುವುದು ದುರದೃಷ್ಟಕರ ಎಂಬ ಅನಿಸಿಕೆಯನ್ನು ಅವರು ವ್ಯಕ್ತಪಡಿಸಿದರು.

ವಿದ್ಯುನ್ಮಾನ ಮಾಧ್ಯಮಗಳು ಇದನ್ನು ಗಂಭೀರವಾಗಿ ಪರಿಗಣಿಸಿ, ಮುಂದಿನ ಹೊಸ ಪೀಳಿಗೆಗೆ ಬೇಕಾದ ಕನ್ನಡವನ್ನು, ಕನ್ನಡಭಾಷೆಯನ್ನು, ನೀಡುವ ನಿಟ್ಟಿನಲ್ಲಿ ಯೋಚನೆ ಮಾಡಬೇಕಾಗಿದೆ. ವಿದ್ಯುನ್ಮಾನ ಮಾಧ್ಯಮಗಳು ಟಿ.ಆರ್.ಪಿ ನೆಪದಲ್ಲಿ ಸದಭಿರುಚಿ, ಶಿಷ್ಟಾಚಾರವುಳ್ಳ ಶುದ್ಧ ಭಾಷಾ ಪ್ರಯೋಗಕ್ಕೆ ಒತ್ತು ನೀಡದೆ ಭಾಷೆಯನ್ನು ದುರ್ಬಳಕೆ ಮಾಡಿಕೊಳ್ಳುತ್ತಿರುವುದು ಸಮಾಜದ ಮೇಲೆ ಅದರಲ್ಲೂ ವಿಶೇಷವಾಗಿ ಯುವ ಪೀಳಿಗೆಯ ಮೇಲೆ ದುಷ್ಪರಿಣಾಮ ಬೀರುತ್ತಿರುವುದನ್ನು ಕಾಣಬಹುದಾಗಿದೆ. ಭಾಷೆ ಮತ್ತು ಸಂಸ್ಕೃತಿಯನ್ನು ದುರ್ಬಳಕೆ ಮಾಡಿಕೊಳ್ಳದೇ ಸುಸಂಸ್ಕೃತ ಸಮಾಜಕ್ಕೆ ಬೇಕಾದ ಸರಳ ಹಾಗೂ ಪರಿಶುದ್ಧ ಭಾಷೆಯನ್ನು ಬಳಸುವಂತಾಗಬೇಕೆಂದರು.

ವಿದ್ಯುನ್ಮಾನ ಮಾಧ್ಯಮದ ನಿರ್ವಾಹಕರು, ಸುದ್ದಿ ನಿರ್ವಾಹಕರಿಗೆ ಕನ್ನಡ ಭಾಷಾ ಬಳಕೆಯ ದೃಷ್ಟಿಯಿಂದ ಸಂವಹನದಲ್ಲಿ ಕನ್ನಡ ಭಾಷಾ ಪ್ರಯೋಗ ಕುರಿತಂತೆ, "ಮಾಧ್ಯಮ ಭಾಷೆ-ಸಂಸ್ಕೃತಿ-ಸಮಾಜ" ಕಾರ್ಯಾಗಾರವನ್ನು ಆಯೋಜಿಸಲು ಚಿಂತನೆ ನಡೆದಿದ್ದು, ಈ ಕಾರ್ಯಾಗಾರದಲ್ಲಿ ಭಾಷಾ ಪ್ರಯೋಗದ ಸಾಮಾಜಿಕ ಹೊಣೆಗಾರಿಕೆಯನ್ನು ಮನವರಿಕೆ ಮಾಡಿಕೊಡುವ ಪ್ರಯತ್ನ ಆಗಬೇಕಾಗಿದೆ ಎಂದರು.

ಈ ಸಂದರ್ಭದಲ್ಲಿ ಕರ್ನಾಟಕ ಮಾಧ್ಯಮ ಅಕಾಡೆಮಿಯ ಮಾಜಿ ಅಧ್ಯಕ್ಷರಾದ ಶ್ರೀ ಪದ್ಮರಾಜ ದಂಡಾವತಿ, ಮುಖ್ಯಮಂತ್ರಿಯವರ ಮಾಧ್ಯಮ ಕಾರ್ಯಾದರ್ಶಿಗಳಾದ ಎನ್. ಭೃಂಗೀಶ್, ವಾರ್ತಾ ಇಲಾಖೆಯ ಜಂಟಿ ನಿರ್ದೇಶಕರಾದ ಹೆಚ್.ಬಿ. ದಿನೇಶ್, ಎ.ಆರ್. ಪ್ರಕಾಶ್, ಬಸವರಾಜ ಕಂಬಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿಗಳಾದ ಡಾ.ಕೆ.ಮುರಳೀಧರ್, ನಮ್ಮ ರೇಡಿಯೋ ಮುಖ್ಯ ಕಾರ್ಯ ನಿರ್ವಾಹಣಾಧಿಕಾರಿ ಅವನೀದರ, ಹಿರಿಯ ಪತ್ರಕರ್ತರುಗಳಾದ ಶ್ರೀ ಇ.ವಿ.ಸತ್ಯನಾರಾಯಣ, ಶ್ರೀ ಲಕ್ಷ್ಮಣ್ ಕೊಡಸೆ, ಸಮುದಾಯ ರೇಡಿಯೋ ಮುಖ್ಯಸ್ಥರುಗಳಾದ ಶ್ರೀಮತಿ ಶಮಂತ, ಶ್ರೀ ಅಬ್ದುಲ್ ರೆಹಮಾನ್ ಪಾಷಾ ಉಪಸ್ಥಿತರಿದ್ದರು. ಕರ್ನಾಟಕ ಮಾಧ್ಯಮ ಅಕಾಡೆಮಿಯ ಕಾರ್ಯದರ್ಶಿಗಳಾದ ಶ್ರೀಮತಿ ಸಿ.ರೂಪಾ ಎಲ್ಲರನ್ನು ಸ್ವಾಗತಿಸಿದರು.